**All India Radio: Bangalore**
**National Bulletin In Kannada**
**25.05.2025 19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. 'ಆಪರೇಷನ್ ಸಿಂದೂರ' ವಿಶ್ವದಾದ್ಯಂತ ಭಯೋತ್ಪಾದನೆ ವಿರುದ್ಧದ ಹೋರಾಟಕ್ಕೆ ಹೊಸ ಭರವಸೆ ; ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ
2. ಪರಮಾಣು ಬೆದರಿಕೆಗೆ ಭಾರತ ಎಂದಿಗೂ ಮಣಿಯುವುದಿಲ್ಲ - ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್
3. ಜಪಾನ್ ಹಿಂದಿಕ್ಕಿ ವಿಶ್ವದ ೪ನೇ ಅತಿದೊಡ್ಡ ಆರ್ಥಿಕತೆಯಾದ ಭಾರತ
4. ಐಪಿಎಲ್ ಟಿ-೨೦ ಕ್ರಿಕೆಟ್ ; ಗುಜರಾತ್ ಟೈಟಾನ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್‌ಗೆ ೮೩ ರನ್‌ಗಳ ಭರ್ಜರಿ ಜಯ

<><><><>

ಇಂದು ಸಂಪೂರ್ಣ ದೇಶ ಭಯೋತ್ಪಾದನೆಯ ವಿರುದ್ಧ ಒಗ್ಗೂಡಿ ನಿಂತಿದೆ. ಭಯೋತ್ಪಾದನೆಯನ್ನು ಕೊನೆಗೊಳಿಸಲೇಬೇಕು ಎಂಬುದು ಇಂದು ಪ್ರತಿಯೊಬ್ಬ ಭಾರತೀಯನ ಸಂಕಲ್ಪವಾಗಿದೆ. 'ಆಪರೇಷನ್ ಸಿಂದೂರ್' ಸಮಯದಲ್ಲಿ ನಮ್ಮ ಸೇನಾ ಪಡೆಗಳು ಪ್ರದರ್ಶಿಸಿದ ಶೌರ್ಯ, ಪ್ರತಿಯೊಬ್ಬ ಭಾರತೀಯನನ್ನು ಹೆಮ್ಮೆಪಡುವಂತೆ ಮಾಡಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು. ಆಕಾಶವಾಣಿಯ ಕಾರ್ಯಕ್ರಮ ಮಾಸಿಕ 'ಮನ್ ಕಿ ಬಾತ್' ನ ೧೨೨ನೇ ಆವೃತ್ತಿಯಲ್ಲಿ ಮಾತನಾಡಿದ ಅವರು, ಗಡಿಯಾಚೆಗಿನ ಭಯೋತ್ಪಾದಕ ಅಡಗುತಾಣಗಳನ್ನು ನಮ್ಮ ಪಡೆಗಳು ನಿಖರತೆಯಿಂದ ಕರಾರುವಾಕ್ಕಾಗಿ ನಾಶಪಡಿಸಿರುವುದು ಅದ್ಭುತವಾಗಿದೆ. 'ಆಪರೇಷನ್ ಸಿಂದೂರ್' ಪ್ರಪಂಚದಾದ್ಯಂತ ಭಯೋತ್ಪಾದನೆಯ ವಿರುದ್ಧದ ಹೋರಾಟಕ್ಕೆ ಹೊಸ ಭರವಸೆ ನೀಡಿದೆ ಮತ್ತು ಉತ್ಸಾಹ ತುಂಬಿದೆ ಎಂದರು. 'ಆಪರೇಷನ್ ಸಿಂದೂರ್' ಕೇವಲ ಮಿಲಿಟರಿ ಕಾರ್ಯಾಚರಣೆಯಲ್ಲ. ಇದು ನಮ್ಮ ದೃಢನಿಶ್ಚಯ, ಧೈರ್ಯ ಮತ್ತು ಬದಲಾಗುತ್ತಿರುವ ಭಾರತದ ಚಿತ್ರಣವಾಗಿದೆ. ಈ ಚಿತ್ರಣ ಇಡೀ ದೇಶವನ್ನು ದೇಶಭಕ್ತಿಯ ಭಾವನೆಯಿಂದ ತುಂಬಿದೆ ಎಂದು ಹೇಳಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೬ ಸೆಕೆಂಡ್‌ಗಳು)**

ಕಳೆದ ಕೇವಲ ಐದು ವರ್ಷಗಳಲ್ಲಿ, ಗುಜರಾತ್‌ನ ಗಿರ್‌ನಲ್ಲಿ ಸಿಂಹಗಳ ಸಂಖ್ಯೆ ೬೭೪ ರಿಂದ ೮೯೧ ಕ್ಕೆ ಏರಿಕೆಯಾಗಿದೆ. ಸಿಂಹಗಳ ಗಣತಿಯ ನಂತರ ತಿಳಿದುಬಂದ ಸಿಂಹಗಳ ಈ ಸಂಖ್ಯೆ ತುಂಬಾ

ಉತ್ತೇಜನಕಾರಿಯಾಗಿದೆ. ಸಿಂಹ ಗಣತಿಯನ್ನು ಹನ್ನೊಂದು ಜಿಲ್ಲೆಗಳಲ್ಲಿ, ೩೫ ಸಾವಿರ ಚದರ ಕಿಲೋಮೀಟರ್ ಪ್ರದೇಶದಲ್ಲಿ ನಡೆಸಲಾಗಿದೆ ಎಂದು ಪ್ರಧಾನಿ ತಿಳಿಸಿದರು. 'ಅಂತಾರಾಷ್ಟ್ರೀಯ ಯೋಗ ದಿನ' ಕ್ಕೆ ಒಂದು ತಿಂಗಳಿಗಿಂತ ಕಡಿಮೆ ಸಮಯ ಉಳಿದಿದೆ. ನೀವು ಇನ್ನೂ ಯೋಗಾಭ್ಯಾಸದಿಂದ ದೂರವಿದ್ದರೆ, ಕೂಡಲೇ ಯೋಗಾಭ್ಯಾಸ ಆರಂಭಿಸಿ ಎಂದು ಸಲಹೆ ನೀಡಿದ ಅವರು, ಜೂನ್ ೨೧ರ 'ಅಂತಾರಾಷ್ಟ್ರೀಯ ಯೋಗ ದಿನ'ದ ಬಗ್ಗೆ ಪ್ರಪಂಚದಾದ್ಯಂತದ ಜನರ ಉತ್ಸಾಹ ಮತ್ತು ಹುಮ್ಮಸ್ಸು ಕಂಡುಬರುತ್ತಿದೆ. ವಿವಿಧ ಸಂಸ್ಥೆಗಳು ತಮ್ಮ ಸಿದ್ಧತೆಯಲ್ಲಿ ತೊಡಗಿಕೊಂಡಿವೆ ಎಂದರು. ಇಂಡೋ-ಟಿಬೆಟಿಯನ್ ಬಾರ್ಡರ್ ಪೊಲೀಸ್-ಐಟಿಬಿಪಿ ತಂಡದ ಸದಸ್ಯರು, ವಿಶ್ವದ ಅತ್ಯಂತ ಕಷ್ಟಕರವಾದ ಶಿಖರ ಎನಿಸಿದ ಮೌಂಟ್ ಮಕಾಲು ಅನ್ನು ಏರಿದ್ದಾರೆ. ಕೇವಲ ಪರ್ವತ ಏರುವುದು ಮಾತ್ರವಲ್ಲ, ಶಿಖರದ ಬಳಿ ಬಿದ್ದಿದ್ದ ಕಸವನ್ನು ತೆಗೆದುಹಾಕಲು ಅವರು ಉಪಕ್ರಮವನ್ನು ಕೈಗೊಂಡರು. ಈ ತಂಡದ ಸದಸ್ಯರು, ೧೫೦ ಕಿಲೋ ಗ್ರಾಮ್‌ಗಿಂತ ಅಧಿಕ ಪ್ರಮಾಣದ ಜೈವಿಕ ವಿಘಟನೀಯವಲ್ಲದ ತ್ಯಾಜ್ಯವನ್ನು ತಮ್ಮೊಂದಿಗೆ ತಂದರು. ಅಷ್ಟು ಎತ್ತರದಲ್ಲಿ ಸ್ವಚ್ಛಗೊಳಿಸುವುದು ಸುಲಭದ ಕೆಲಸವಲ್ಲ ಎಂದು ಪ್ರಧಾನಿ ಹೇಳಿದರು. ಮೇ ೨೦ ರಂದು 'ವಿಶ್ವ ಜೇನುನೊಣ ದಿನ' ಎಂದು ಆಚರಿಸಲಾಯಿತು. ಜೇನುತುಪ್ಪವು ಕೇವಲ ಸಿಹಿ ಮಾತ್ರವಲ್ಲ. ಆರೋಗ್ಯ, ಸ್ವ-ಉದ್ಯೋಗ ಮತ್ತು ಸ್ವಾವಲಂಬನೆಯ ಉದಾಹರಣೆಯಾಗಿದೆ ಎಂಬುದನ್ನು ನೆನಪಿಸುತ್ತದೆ. ಕಳೆದ ೧೧ ವರ್ಷಗಳಲ್ಲಿ, ಭಾರತದಲ್ಲಿ ಜೇನು ಸಾಕಣೆಯಲ್ಲಿ ಒಂದು ಸಿಹಿ ಕ್ರಾಂತಿ ನಡೆದಿದೆ. ೧೦-೧೧ ವರ್ಷಗಳ ಹಿಂದೆ, ಭಾರತದ ಜೇನುತುಪ್ಪದ ಉತ್ಪಾದನೆಯು ಒಂದು ವರ್ಷದಲ್ಲಿ ಸುಮಾರು ೭೦-೭೫ ಸಾವಿರ ಮೆಟ್ರಿಕ್ ಟನ್ ಗಳಷ್ಟಿತ್ತು. ಇಂದು, ಇದು ಸರಿ ಸುಮಾರು ಒಂದೂ ಕಾಲು ಲಕ್ಷ ಮೆಟ್ರಿಕ್ ಟನ್‌ಗಳಷ್ಟು ಆಗಿದೆ. ಜೇನುತುಪ್ಪದ ಉತ್ಪಾದನೆ ಸುಮಾರು ಶೇಕಡಾ ೬೦ರಷ್ಟು ಹೆಚ್ಚಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

<><><>

ಪರಮಾಣು ಬೆದರಿಕೆಗೆ ಭಾರತ ಎಂದಿಗೂ ಮಣಿಯುವುದಿಲ್ಲ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ಜರ್ಮನಿಗೆ ಭೇಟಿ ನೀಡಿರುವ ಅವರು, ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡು ಮಾತನಾಡಿ, ಭಯೋತ್ಪಾದನೆ ಕುರಿತು ಭಾರತ ಶೂನ್ಯ ಸಹಿಷ್ಣುತೆ ಹೊಂದಿದೆ ಎಂದು ತಿಳಿಸಿದರು. ಪಾಕಿಸ್ತಾನ ಭಾರತಕ್ಕೆ ಪರಮಾಣು ಬೆದರಿಕೆ ಒಡ್ಡುತ್ತಿದ್ದು, ಭಾರತ ಅದಕ್ಕೆ ಮಣಿಯುವ ಪ್ರಶ್ನೆಯೇ ಇಲ್ಲ. ಪಾಕಿಸ್ತಾನದೊಂದಿಗೆ ಸಂಪೂರ್ಣವಾಗಿ ದ್ವಿಪಕ್ಷೀಯವಾಗಿ ವ್ಯವಹರಿಸಲಾಗುವುದು ಎಂದು ಸಚಿವ ಡಾ. ಎಸ್. ಜೈಶಂಕರ್ ಹೇಳಿದರು.

<><><>

ಜಪಾನ್ ಅನ್ನು ಹಿಂದಿಕ್ಕಿ ಭಾರತವು ವಿಶ್ವದ ೪ನೇ ಅತಿದೊಡ್ಡ ಆರ್ಥಿಕತೆಯಾಗಿದೆ ಎಂದು ನೀತಿ ಆಯೋಗದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ.ಆರ್. ಸುಬ್ರಮಣ್ಯಂ ತಿಳಿಸಿದ್ದಾರೆ. ಈ ಕುರಿತು ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾಹಿತಿ ನೀಡಿದ ಅವರು, ಅಂತಾರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್ ದತ್ತಾಂಶದ ಪ್ರಕಾರ, ಭಾರತವು ಇಂದು ಜಪಾನ್ ದೇಶಕ್ಕಿಂತ ದೊಡ್ಡ ಆರ್ಥಿಕತೆಯಾಗಿ ಬೆಳೆದಿದೆ. ನಾಲ್ಕು ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗಿರುವ ಭಾರತ, ವಿಶ್ವದ ೪ನೇ ಅತಿದೊಡ್ಡ ಆರ್ಥಿಕತೆಯಾಗಿದೆ ಎಂದು ಹೇಳಿದ್ದಾರೆ. ಮುಂದಿನ ೨-೩ ವರ್ಷಗಳಲ್ಲಿ ಭಾರತ, ವಿಶ್ವದ ೩ನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

<><><>

ನವದೆಹಲಿಯಲ್ಲಿಂದು ಎನ್‌ಡಿಎ ಮುಖ್ಯಮಂತ್ರಿಗಳ ಮತ್ತು ಉಪಮುಖ್ಯಮಂತ್ರಿಗಳ ಒಂದು ದಿನದ ಸಮಾವೇಶ ನಡೆಯಿತು. ಪ್ರಧಾನಮಂತ್ರಿ ನರೇಂದ್ರ ಮೋದಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಉತ್ತಮ ಆಡಳಿತ ಕುರಿತ ವಿಷಯಗಳ ಬಗ್ಗೆ ಚರ್ಚೆ ನಡೆಸಲಾಯಿತು. ಬಿಜೆಪಿ ಅಧ್ಯಕ್ಷ ಜಗತ್‌ಪ್ರಕಾಶ್ ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಭೆಯಲ್ಲಿ ಪಾಲ್ಗೊಂಡಿದ್ದರು. ಎನ್‌ಡಿಎ ಆಡಳಿತದ ಎಲ್ಲಾ ೨೦ ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ೧೮ ಉಪಮುಖ್ಯಮಂತ್ರಿಗಳು ಸಭೆಯಲ್ಲಿ ಪಾಲ್ಗೊಂಡು, ಉತ್ತಮ ಆಡಳಿತಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚೆ ನಡೆಸಿದರು. ಮೊದಲ ನಿರ್ಣಯದಲ್ಲಿ ಆಪರೇಷನ್ ಸಿಂದೂರ್‌ನ ಯಶಸ್ಸಿಗಾಗಿ, ಭಾರತೀಯ ರಕ್ಷಣಾ ಪಡೆಗಳು ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಅಭಿನಂದಿಸಲಾಯಿತು. ನಂತರದ ನಿರ್ಣಯದಲ್ಲಿ ಮುಂದಿನ ಜನಗಣತಿ ಸಮಯದಲ್ಲಿ ಜಾತಿಗಣತಿ ನಡೆಸುವ ಸರ್ಕಾರದ ನಿರ್ಧಾರಕ್ಕಾಗಿ ಕೇಂದ್ರ ಸರ್ಕಾರವನ್ನು ಅಭಿನಂದಿಸಲಾಯಿತು.

<><><>

ರಾಷ್ಟ್ರವ್ಯಾಪಿ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ವನ್ನು ಇದೇ ೨೯ ರಂದು ಒಡಿಶಾದ ಪುರಿಯಿಂದ ಪ್ರಾರಂಭಿಸಲಾಗುವುದು ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಈ ಅಭಿಯಾನವು ೭೦೦ ಸ್ಥಳಗಳಲ್ಲಿ ನಡೆಯಲಿದ್ದು, ವಿಜ್ಞಾನಿಗಳ ತಂಡವು ರೈತರೊಂದಿಗೆ ನೇರ ಸಂವಾದದಲ್ಲಿ ತೊಡಗಿಸಿಕೊಳ್ಳುವ ಮೂಲಕ ಹಳ್ಳಿ-ಹಳ್ಳಿಗೆ ಪ್ರಯಾಣಿಸಲಿದೆ ಎಂದು ಅವರು ಮಾಹಿತಿ ನೀಡಿದರು. ಈ ಅಭಿಯಾನದಲ್ಲಿ ೭೩೧ ಕೃಷಿ ವಿಜ್ಞಾನ ಕೇಂದ್ರಗಳು, ೧೧೩ ಭಾರತೀಯ ಕೃಷಿ ಸಂಶೋಧನಾ ಮಂಡಳಿ ಸಂಸ್ಥೆಗಳು, ರಾಜ್ಯ ಮಟ್ಟದ ಇಲಾಖೆಗಳು ಮತ್ತು ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಮೀನುಗಾರಿಕೆ ಮತ್ತು ನವೀನ ರೈತರ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

<><><>

ಕಾರ್ಮಿಕರ ಭವಿಷ್ಯ ನಿಧಿ ಯೋಜನೆಯ ಬಡ್ಡಿ ದರವನ್ನು ಏರಿಕೆ ಮಾಡಲು ಕೇಂದ್ರ ಸರ್ಕಾರ ಸಮ್ಮತಿಸಿದೆ. ೨೦೨೪-೨೫ನೇ ಸಾಲಿಗೆ ಕಾರ್ಮಿಕರ ವಿಮಾ ನಿಧಿಯ ಬಡ್ಡಿ ದರವನ್ನು ಶೇಕಡ ೮.೨೫ರಷ್ಟು ನಿಗದಿಪಡಿಸಲಾಗಿದೆ.

ಇದರಿಂದ ದೇಶಾದ್ಯಂತ ೬ ಕೋಟಿಗೂ ಹೆಚ್ಚು ವೇತನ ಪಡೆಯುವ ಉದ್ಯೋಗಿಗಳಿಗೆ ಅನುಕೂಲವಾಗಲಿದೆ. ೨೦೨೨-೨೩ನೇ ಸಾಲಿನಲ್ಲಿ ಇಪಿಎಫ್ ಗೆ ಶೇಕಡ ೮.೧೫ರಷ್ಟು ಬಡ್ಡಿ ನಿಗದಿಪಡಿಸಲಾಗಿತ್ತು. ಕಳೆದ ಆರ್ಥಿಕ ವರ್ಷ ೨೦೨೩-೨೪ರಲ್ಲಿ ಈ ಬಡ್ಡಿ ದರದಲ್ಲಿ ಯಾವುದೇ ಬದಲಾವಣೆ ಮಾಡಿರಲಿಲ್ಲ. ಆದರೆ ಬದಲಾಗುತ್ತಿರುವ ಕಾಲಘಟ್ಟದ ಹಿನ್ನೆಲೆಯಲ್ಲಿ ಹಾಗೂ ಆರ್‌ಬಿಐ ರೆಪೋ ದರಗಳ ಬದಲಾವಣೆ ಮಾಡಿರುವ ಹಿನ್ನೆಲೆಯಲ್ಲಿ ಇಪಿಎಫ್ ಬಡ್ಡಿದರ ಹೆಚ್ಚಳಕ್ಕೆ ಕೇಂದ್ರ ಸರ್ಕಾರ ಅನುಮತಿಸಿದೆ.

<><><><>

ಉತ್ತರಾಖಂಡದ ಚಮೋಲಿ ಜಿಲ್ಲೆಯ ಹೇಮಕುಂಡ್ ಸಾಹೇಬ್ ಇಂದಿನಿಂದ ದರ್ಶನಕ್ಕೆ ಮುಕ್ತವಾಗಿದೆ. ಜಿಲ್ಲಾಡಳಿತವು ಯಾತ್ರಿಕರಿಗೆ ಸಕಲ ವ್ಯವಸ್ಥೆಗಳನ್ನು ಮಾಡಿದೆ. ಗುರುದ್ವಾರ ವ್ಯವಸ್ಥಾಪನಾ ಸಮಿತಿಯು ಜಿಲ್ಲಾಡಳಿತದೊಂದಿಗೆ ಕೈಜೋಡಿಸಿದ್ದು, ಯಾತ್ರಿಕರಿಗೆ ಸುಗಮ ದರ್ಶನಕ್ಕಾಗಿ ವ್ಯವಸ್ಥೆ ಮಾಡಿದೆ. ಹೇಮಕುಂಡ್ ಸಾಹೇಬ್, ಸಿಖ್ಖರ ೧೦ನೇ ಧರ್ಮಗುರು ಗುರು ಗೋವಿಂದ್ ಸಿಂಗ್ ಸಮರ್ಪಿತವಾದ ಗುರುದ್ವಾರವಾಗಿದ್ದು, ಸಿಖ್ ಧರ್ಮೀಯರಿಗೆ ಅತ್ಯಂತ ಪವಿತ್ರ ಸ್ಥಳವೆಂದು ಪರಿಗಣಿತವಾಗಿದೆ.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆದ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಪಂದ್ಯಾವಳಿಯ ದಿನದ ಮೊದಲ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ೮೩ ರನ್‌ಗಳಿಂದ ಭರ್ಜರಿ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೩೦ ರನ್ ಮಾಡಿತು. ಈ ಗುರಿಯನ್ನು ಬೆನ್ನತ್ತಿದ  ಗುಜರಾತ್ ಟೈಟಾನ್ಸ್ ೧೮.೩ ಓವರ್‌ಗಳಲ್ಲಿ ೧೪೬ ರನ್‌ಗಳಿಗೆ ತನ್ನೆಲ್ಲ ವಿಕೆಟ್‌ಗಳನ್ನು ಕಳೆದುಕೊಂಡು ಸೋಲು ಅನುಭವಿಸಿತು. ದೆಹಲಿಯಲ್ಲಿ ನಡೆಯುತ್ತಿರುವ ದಿನದ ಎರಡನೇ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಹಾಗೂ ಕೋಲ್ಕತ್ತ ನೈಟ್ ರೈಡರ್ರ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಸನ್‌ರೈಸರ್ಸ್ ಹೈದರಾಬಾದ್ ಫಿಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>